ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 138 ಜಿಪಸ 2017, ದಿನಾಂಕ:31-08-2019ರನ್ವಯ ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ (ಆರ್.ಜಿ.ಎಸ್.ಎ) ಯೋಜನೆಯಡಿ ರಾಜ್ಯದ ಪಾಲಿನ ಲಭ್ಯವಿರುವ ಅನುದಾನಕ್ಕೆ ಕ್ರಿಯಾಯೋಜನೆಯನ್ನು ತಯಾರಿಸುವ ಸಲುವಾಗಿ ದಿನಾಂಕ:06-09-2019ರಂದು ನಡೆದ ಸಮಿತಿ ಸಭೆಯಲ್ಲಿ ತೀರ್ಮಾನಿಸಿರುವಂತೆ ಚರ್ಚಿಸಿ ಅಂತಿಗೊಳಿಸಲು ರಾಜ್ಯ ಕಾರ್ಯಕಾರಿ ಸಮಿತಿ ಸಭೆಯನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಅಧ್ಯಕ್ಷತೆಯಲ್ಲಿ ದಿನಾಂಕ:19-09-2019ರಂದು ಅಪರಾಹ್ನ 3.00 ಗಂಟೆಗೆ ನಡೆದ ಸಭೆಯ ನಡವಳಿಗಳು.

ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು:

1. ಶ್ರೀಮತಿ ಉಮಾ ಮಹಾದೇವನ್, ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
2. ಶ್ರೀ ಪಿ.ಶಿವಶಂಕರ್, ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
3. ಶ್ರೀಮತಿ ಲತಾದೇವಿ, ಜಂಟಿ ನಿರ್ದೇಶಕರು, ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಶ್ರೀ ಎ.ಎ.ಚಪ್ಪರಬಂದ್, ಸರ್ಕಾರದ ಉಪಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಶ್ರೀಮತಿ ಸಿ.ಆರ್.ಹೇಮಲತಾ, ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಶ್ರೀಮತಿ ವನಜ, ಅಧೀಕ್ಷಕರು, ಐ.ಸಿ.ಡಿ.ಎಸ್. ವಿಭಾಗ, ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
7. ಡಾ. ಶಂಕರಪ್ಪ ಹೊಸಕೇರಿ, ರಾಜ್ಯ ಸಮಾಲೋಚಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
8. ಶ್ರೀ ಪಿ.ಜಿ.ವೇಣುಗೋಪಾಲ್, ಬೋಧಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
9. ಸಮನ್ವಯಾಧಿಕಾರಿ, ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಶ್ರೀಮತಿ ವಿ. ಲಕ್ಷ್ಮೀ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಹಂತ-5, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ಶ್ರೀ ಇಮ್ತಿಯಾಜ್, ರಾಜ್ಯ ಯೋಜನಾ ವ್ಯವಸ್ಥಾಪಕರು, ಇ-ಪಂಚಾಯತ್, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

*****

ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರು ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳನ್ನು ಸ್ವಾಗತಿಸಿ, ಈ ಕೆಳಕಂಡ ವಿಷಯಗಳನ್ನು ಚರ್ಚಿಸಲಾಯಿತು.

ದಿನಾಂಕ:19-08-2019ರಂದು ನಡೆದ ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಕೇಂದ್ರ ಪುರಸ್ಕೃತ ಯೋಜನೆಯಾದ ಸಾಮರ್ಥ್ಯಾಭಿವೃದ್ಧಿ-ಪಂಚಾಯತಿ ಸಶಕ್ತೀಕರಣ ಅಭಿಯಾನ ಯೋಜನೆಯಡಿ 2017-18ನೇ ಸಾಲಿನಲ್ಲಿ ಎರಡು ಕಂತುಗಳ ಕೇಂದ್ರದ ಪಾಲಿನ ಅನುದಾನಗಳಿಗೆ ಎದುರಾಗಿ ಸೆಳೆಯಲಾದ ರಾಜ್ಯದ ಪಾಲಿನ ಒಟ್ಟು ಅನುದಾನ ರೂ.13,69,31,000/-ಗಳಿಗೆ ಕ್ರಿಯಾಯೋಜನೆಯನ್ನು ತಯಾರಿಸಲು ರಾಜ್ಯ ಮಟ್ಟದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರ ಅಧ್ಯಕ್ಷತೆಯಲ್ಲಿ ನಿರ್ದೇಶಕರು(ಪಂ.ರಾಜ್-1), ನಿರ್ದೇಶಕರು(ಪಂ.ರಾಜ್-2), ನಿರ್ದೇಶಕರು, ಇ-ಆಡಳಿತ, ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು, ಜಂಟಿ ನಿರ್ದೇಶಕರು, ಸಾಮಾಜಿಕ ಲೆಕ್ಕ ಪರಿಶೋಧನೆ ನಿರ್ದೇಶನಾಲಯ ಹಾಗೂ ಸಲಹೆಗಾರರು(ಪಂ.ರಾಜ್) ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರುಗಳನ್ನೊಳಗೊಂಡಂತೆ ಸಮಿತಿಯನ್ನು ರಚಿಸಲು ತೀರ್ಮಾನಿಸಿರುವ ಹಿನ್ನೆಲೆಯಲ್ಲಿ ದಿನಾಂಕ:31-08-2019ರಂದು ಒಂದು ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯು ದಿನಾಂಕ:06-09-2019ರಂದು ಸಭೆಯನ್ನು ಸೇರಿ, ಕೆಲವು ತೀರ್ಮಾನಗಳನ್ನು ಕೈಗೊಳ್ಳಲಾಗಿರುತ್ತದೆ. ಸದರಿ ಸಮಿತಿಯ ತೀರ್ಮಾನಗಳನ್ನು ರಾಜ್ಯ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಚರ್ಚಿಸಿ ಅಂತಿಮಗೊಳಿಸಬೇಕಾಗಿರುತ್ತದೆ.

ಅದರಂತೆ, ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತ(ಕೆ.ಆರ್.ಐ.ಡಿ.ಎಲ್), ಬೆಂಗಳೂರು ಇವರ ವರದಿಯ ಪ್ರಕಾರ ಈಗಾಗಲೇ ಹಾವೇರಿ, ಬೆಳಗಾವಿ, ಉತ್ತರ ಕನ್ನಡ(ಕಾರವಾರ), ತುಮಕೂರು, ಬೀದರ್, ಕಲಬುರಗಿ, ಯಾದಗಿರಿ, ಕೊಡಗು, ಮೈಸೂರು, ಚಾಮರಾಜನಗರ ಹಾಗೂ ಉಡುಪಿ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳ ಕಾಮಗಾರಿಯು ಪೂರ್ಣ ಪ್ರಮಾಣದಲ್ಲಿ ಮುಕ್ತಾಯಗೊಂಡಿದ್ದು, ಆದರೆ ಸಂಬಂಧಪಟ್ಟ ಜಿಲ್ಲಾ ಪಂಚಾಯತಿಗಳ ವಶಕ್ಕೆ ಹಸ್ತಾಂತರಿಸದಿರುವುದರಿಂದ ಸದರಿ 11 ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳಿಗೆ ಅಗತ್ಯ ಪೀಠೋಪಕರಣಗಳು ಮತ್ತು ಮೂಲಭೂತ ಸೌಲಭ್ಯಗಳನ್ನು ಒದಗಿಸಲು ತಲಾ ಒಂದು ಕೇಂದ್ರಕ್ಕೆ ರೂ.25.00(ಇಪ್ಪತ್ತೈದು ಲಕ್ಷ

ರೂಪಾಯಿಗಳು ಮಾತ್ರ)ಲಕ್ಷಗಳಂತೆ ಒಟ್ಟು ರೂ.275.00ಲಕ್ಷಗಳನ್ನು ದಿನಾಂಕ:27-08-2019ರಂದು ಬಿಡುಗಡೆಗೊಳಿಸಲಾಗಿರುತ್ತದೆ. ಸದರಿ ಜಿಲ್ಲಾ ಪಂಚಾಯತಿಗಳ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳಿಗೆ ಹೆಚ್ಚುವರಿ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಉಳಿದ ರೂ.275.00ಲಕ್ಷಗಳನ್ನು ಬಿಡುಗಡೆಗೊಳಿಸುವ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿರುತ್ತದೆ. ಮೇಲೆ ತಿಳಿಸಿದ 11 ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳು ಆಯಾ ಜಿಲ್ಲಾ ಪಂಚಾಯತಿಗಳು ವಶಕ್ಕೆ ಪಡೆದುಕೊಂಡಿರುವುದನ್ನು ಸಂಬಂಧಪಟ್ಟ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಖಾತರಿಪಡಿಸಿಕೊಂಡು ತದನಂತರ ಅನುದಾನವನ್ನು ಬಿಡುಗಡೆಗೊಳಿಸುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)ರವರು ಸೂಚಿಸಿದರು.

ಉಳಿದಂತೆ, 4 ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿದ್ದು, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ಪಂಚಾಯತ್ ರಾಜ್ ಭವನ ಕಟ್ಟಡದೊಂದಿಗೆ ನಿರ್ಮಿಸಬಹುದಾಗಿರುತ್ತದೆ. ಮಂಡ್ಯ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡವನ್ನು ನಿರ್ಮಿಸುವ ಸಲುವಾಗಿ ನಿವೇಶನವನ್ನು ಗುರುತಿಸಲಾಗಿದೆ. ಗದಗ ಮತ್ತು ಕೋಲಾರ ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರ ಕಟ್ಟಡಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವ ಹಂತದಲ್ಲಿರುತ್ತವೆ. ಇವುಗಳಿಗೆ ಮುಂಚಿತವಾಗಿ ಹೆಚ್ಚುವರಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ತಲಾ ರೂ.50.00ಲಕ್ಷಗಳ ಹಾಗೆ ಒಟ್ಟಾರೆ, ರೂ.400.00ಲಕ್ಷಗಳನ್ನು ಬಿಡುಗಡೆಗೊಳಿಸುವ ಬಗ್ಗೆ ಆಯಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡು ತದನಂತರ ಅನುದಾನವನ್ನು ಬಿಡುಗಡೆಗೊಳಿಸುವಂತೆ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)ರವರು ಸೂಚಿಸಿದರು.

2019ನೇ ಫೆಬ್ರವರಿ 22 ಮತ್ತು 23 ರಂದು ಪಂಚಾಯತ್ ರಾಜ್ ಮಂತ್ರಾಲಯದ ಆರ್.ಜಿ.ಎಸ್.ಎ.ಯೋಜನೆಯಡಿಯ ಕೇಂದ್ರ ಉನ್ನತಾಧಿಕಾರ ಸಮಿತಿ ಸಭೆಯಲ್ಲಿ ಕರ್ನಾಟಕ ರಾಜ್ಯದ ಆರ್.ಜಿ.ಎಸ್.ಎ. ಕ್ರಿಯಾಯೋಜನೆಯನುಸಾರ ರೂ.52.71 ಕೋಟಿಗಳ ಮೊತ್ತಕ್ಕೆ ಅನುಮೋದನೆ ದೊರೆತಿರುತ್ತದೆ. ಇದರಲ್ಲಿ e-Enablement of Panchayath ಎಂಬ ಚಟುವಟಿಕೆಗೆ ರೂ.1.32 ಕೋಟಿಗಳಿಗೆ ಅನುಮೋದನೆ ನೀಡಿರುತ್ತಾರೆ. ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರು ರೂ.1,67,85,264/-ಗಳನ್ನು ಬಿಡುಗಡೆಗೊಳಿಸುವಂತೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು, ಕೇಂದ್ರ ಉನ್ನತಾಧಿಕಾರ ಸಮಿತಿ ಸಭೆಯಿಂದ ಅನುಮೋದನೆಗೊಂಡ ರೂ.1.32ಕೋಟಿಗಳೊಂದಿಗೆ ರೂ.35,85,264/-ಗಳು ಒಟ್ಟಾರೆ ರೂ.167.85ಲಕ್ಷಗಳನ್ನು ರಾಜ್ಯದ ಪಾಲಿನ ಅನುದಾನದಿಂದ ಹೆಚ್ಚುವರಿಯಾಗಿ ಭರಿಸಲು ತೀರ್ಮಾನವನ್ನು ಕೈಗೊಳ್ಳಲಾಯಿತು.

ಈಗಾಗಲೇ ದಿನಾಂಕ:19-08-2019ರಂದು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನಿಸಿದಂತೆ ರಾಜ್ಯದ ಎಲ್ಲಾ ತಾಲ್ಲೂಕುಗಳಲ್ಲಿ ಗ್ರಾಮ ಸ್ವರಾಜ್ ಯೋಜನೆಯಡಿಯಲ್ಲಿ ನಿರ್ಮಿಸಲಾದ ತಾಲ್ಲೂಕು ಸಾಮರ್ಥ್ಯಸೌಧಗಳಿಗೆ ಮೂಲಭೂತ ಪೀಠೋಪಕರಣಗಳನ್ನು ಒದಗಿಸುವ ಸಲುವಾಗಿ ರೂ.1.00ಲಕ್ಷಗಳನ್ನು ಒದಗಿಸುವುದರೊಂದಿಗೆ ಪ್ರತಿ ಸಾಮರ್ಥ್ಯಸೌಧಗಳಿಗೆ 1-ಹಸಿರು ಹಲಗೆ(Green Board) ಮತ್ತು 1-ಬಿಳಿ ಹಲಗೆ(White Board), 1-ಉನ್ನತ ವೇದಿಕೆ (ಪೋಡಿಯಂ), ಚಾರ್ಜರ್ ಪಾಯಿಂಟ್, ಲ್ಯಾನ್ ಕೇಬಲ್ & ಹಾಗೂ ಪವರ್ ಕೇಬಲ್‌ಗಳನ್ನು ಅಳವಡಿಸಲು ಅನುಕೂಲವಾಗುವಂತಹ ಮೀಟಿಂಗ್ ಟೇಬಲ್ ಮತ್ತು ಕಟ್ಟಡಕ್ಕೆ ಅನ್ವಯಿಸುವಂತೆ ವುಡನ್ ಚೇರ್ಸ್‌ಗಳಿಗೆ Specification ಅನ್ನು ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು ಇವರಿಂದ ಅಂದಾಜು ಪಟ್ಟಿಯನ್ನು ಸಿದ್ಧಪಡಿಸಿ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಇವರಿಂದ ಅನುಮೋದನೆ ಪಡೆದುಕೊಳ್ಳುವುದು. ಇವುಗಳನ್ನು ಖರೀದಿಸಲು ಪ್ರತಿ ಸಾಮರ್ಥ್ಯಸೌಧಗಳಿಗೆ (ಬೆಂಗಳೂರುನಗರ ಮತ್ತು ಗ್ರಾಮಾಂತರ ಜಿಲ್ಲೆಯ ತಾಲ್ಲೂಕು ಸಾಮರ್ಥ್ಯಸೌಧಗಳನ್ನು ಹೊರತುಪಡಿಸಿ) ತಲಾ ರೂ.3.00ಲಕ್ಷಗಳ ಹಾಗೆ ಒಟ್ಟಾರೆ ರೂ.5.04ಕೋಟಿಗಳನ್ನು ಸಂಬಂಧಪಟ್ಟ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಬಿಡುಗಡೆಗೊಳಿಸಲು ತೀರ್ಮಾನಿಸಲಾಯಿತು.

ಅಂತಿಮವಾಗಿ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಸಂಖ್ಯೆ:ಗ್ರಾಅಪ 138 ಜಿಪಸ 2017

23/9/19.

(ಉಮಾ ಮಹಾದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಹಂತ-5, ಬಹುಮಹಡಿಗಳ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಶಿಷ್ಠ ಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
8. ಸರ್ಕಾರದ ಕಾರ್ಯದರ್ಶಿ, ಕೃಷಿ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ನಿರ್ದೇಶಕರು(ಪಂ.ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
11. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
12. ನಿರ್ದೇಶಕರು(ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

ಪ್ರತಿಯನ್ನು:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿ- ಮಾಹಿತಿಗಾಗಿ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿ